**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗಕ್ಕೆ 2016–17ನೇ ಪ್ರಥಮ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗ ಇವರ ಪತ್ರ ಸಂಖ್ಯೆ:ಬಪ್ರಮಂ/ಚಿ/ಲೆ.ಶಾ/ಅನುದಾನ ಬಿಡುಗಡೆ/2016–17/144, ದಿನಾಂಕ:27.05.2016

**ಪ್ರಸ್ತಾವನೆ:**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ 2016–17ನೇ ಸಾಲಿನ ಆಯವ್ಯಯದಲ್ಲಿ ಒಟ್ಟು ರೂ.4500.00 ಲಕ್ಷಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸಲಾಗಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ ಲಕ್ಷಗಳಲ್ಲಿ) |
|---|---|---|
| 1. | 2515–00–103–0–03–101 (ಸಹಾಯಾನುದಾನ) | 77.00 |
| 2. | 2515–00–103–0–03–132 (ಬಂಡವಾಳ ವೆಚ್ಚ) | 3334.00 |
| 3. | 2515–00–103–0–03–422 (ವಿಶೇಷ ಘಟಕ ಯೋಜನೆ) | 775.00 |
| 4. | 2515–00–103–0–03–423 (ಗಿರಿಜನ ಉಪಯೋಜನೆ) | 314.00 |
| | **ಒಟ್ಟು** | **4500.00** |

ಮೇಲೆ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗ ಇವರು ಮಂಡಳಿಗೆ 2016–17ನೇ ಸಾಲಿನ ಪ್ರಥಮ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗಕ್ಕೆ 2016–17ನೇ ಸಾಲಿನ ಪ್ರಥಮ ಕಂತಿನ ಅನುದಾನ ರೂ.1125.00 ಲಕ್ಷಗಳನ್ನು ಬಿಡುಗಡೆ ಮಾಡಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಯೋಇ 19 ಪಿಟಿಪಿ 2016, ಬೆಂಗಳೂರು, ದಿನಾಂಕ:14.06.2016**

ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ಚಿತ್ರದುರ್ಗಕ್ಕೆ 2016–17ನೇ ಸಾಲಿನ ಪ್ರಥಮ ಕಂತಿನ ಅನುದಾನ ರೂ.1125.00 ಲಕ್ಷ (ಹನ್ನೊಂದು ಕೋಟಿ ಇಪ್ಪತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಬಿಡುಗಡೆ ಮಾಡಿದೆ.

| ಕ್ರಮ ಸಂಖ್ಯೆ | ಲೆಕ್ಕಶೀರ್ಷಿಕೆ | ಮೊತ್ತ (ರೂ ಲಕ್ಷಗಳಲ್ಲಿ) |
|---|---|---|
| 1. | 2515–00–103–0–03–101 (ಸಹಾಯಾನುದಾನ) | 19.25 |
| 2. | 2515–00–103–0–03–132 (ಬಂಡವಾಳ ವೆಚ್ಚ) | 833.50 |
| 3. | 2515–00–103–0–03–422 (ವಿಶೇಷ ಘಟಕ ಯೋಜನೆ) | 193.75 |
| 4. | 2515–00–103–0–03–423 (ಗಿರಿಜನ ಉಪಯೋಜನೆ) | 78.50 |
| | **ಒಟ್ಟು** | **1125.00** |

**ಷರತ್ತುಗಳು:**

1. 2016–17ನೇ ಸಾಲಿನ ಕ್ರಿಯಾ ಯೋಜನೆಯನ್ನು ದಿನಾಂಕ 30.06.2016ರೊಳಗೆ ಸರ್ಕಾರದ ಅನುಮೋದನೆಗಾಗಿ ಸಲ್ಲಿಸತಕ್ಕದ್ದು.

.............2

2. ಬಿಡುಗಡೆಯಾದ ಈ ಅನುದಾನವನ್ನು ಮಂಡಳಿಯ ಬ್ಯಾಂಕ್ ಖಾತೆಗೆ ಜಮೆ ಮಾಡಿ, ನಂತರ ಅವಶ್ಯಕತೆಗನುಗುಣವಾಗಿ ಪ್ರಸಕ್ತ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳಿಗೆ ಮಾತ್ರ ನಿಯಮಾನುಸಾರ ಖರ್ಚು ಮಾಡತಕ್ಕದು.

3. ಮಂಡಳಿಯ ಬ್ಯಾಂಕ್ ಖಾತೆಯಲ್ಲಿ ಲಭ್ಯವಿರುವ ಅನುದಾನ ಮತ್ತು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನದ ಶೇಕಡ 75 ರಷ್ಟನ್ನು ವೆಚ್ಚ ಭರಿಸಿ, ಹಣಬಳಕೆ ಪ್ರಮಾಣಪತ್ರದೊಂದಿಗೆ 2ನೇ ಕಂತಿನ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಆಇ 03 ಟಿಎಫ್‌ಪಿ 2016, ದಿನಾಂಕ:02.04.2016 ರಲ್ಲಿ ಸರ್ಕಾರದ ಆಡಳಿತ ಇಲಾಖೆಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

14/6

**(ಬಿ.ವಿ.ಮಹೇಂದ್ರ)**
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್-5)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ

***ಇವರಿಗೆ:***

1. ಪ್ರಧಾನ ಮಹಾಲೇಖಪಾಲರು(ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು.
3. ಮಹಾಲೇಖಪಾಲರು (ಲೆಕ್ಕಪತ್ರ)/(ಲೆಕ್ಕ ಪರಿಶೋಧನಾ ಮತ್ತು 1&2) ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
6. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
7. ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ತಮಟಕಲ್ಲು ರಸ್ತೆ, ಚಿತ್ರದುರ್ಗ.
8. ನಿರ್ದೇಶಕರು, ಎಡಿಬಿ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ಜಿಲ್ಲಾ ಖಜಾನಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
11. ಶಾಖಾಧಿಕಾರಿ, ಸ್ವೀಮರ ಶಾಖೆ, ಯೋಜನಾ ಇಲಾಖೆ (ಕಾಂಪೆಂಡಿಯಮ್‌ಗೋಸ್ಕರ).
12. ವಾರದ ರಾಜ್ಯಪತ್ರ.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

***